ನಿ-72 (90)

**ಮಾನ್ಯ ವಿಧಾನಪರಿಷತ್ತಿನ ಸದಸ್ಯರಾದ ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ ರವರು ನಿಯಮ 72ರಡಿಯಲ್ಲಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನಾ ಪತ್ರಕ್ಕೆ ಉತ್ತರಿಸುವ ಬಗ್ಗೆ.**

**ವಿಷಯ :**

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಮತ್ತು ಕರ್ನಾಟಕ ಚಲನಚಿತ್ರ ಅಕಾಡೆಮಿಯ ಸಹಯೋಗದೊಂದಿಗೆ ನಡೆಸುತ್ತಿರುವ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ ಉದ್ಘಾಟನಾ ಮತ್ತು ಮುಕ್ತಾಯ ಸಮಾರಂಭಕ್ಕೆ ಕೋಟ್ಯಂತರ ರೂಪಾಯಿಗಳನ್ನು ದುಂದು ವೆಚ್ಚ ಮಾಡಲಾಗುತ್ತಿದೆ. ಅಲ್ಲದೆ ಪ್ರಸಕ್ತ ಸಾಲಿನಲ್ಲಿ ಕೋವಿಡ್ ಆರ್ಥಿಕ ಸಂದಿಗ್ಧ ಪರಿಸ್ಥಿತಿಯಲ್ಲಿ ಈ ರೀತಿ ಸರ್ಕಾರದ ಹಣವನ್ನು ದುಂದು ವೆಚ್ಚ ಮಾಡುತ್ತಿರುವುದು ಅರ್ಥಹೀನ. ಇದರಿಂದಾಗಿ ಸರ್ಕಾರದ ಬೊಕ್ಕಸಕ್ಕೆ ಕೋಟ್ಯಾಂತರ ರೂಪಾಯಿಗಳ ನಷ್ಟ ಉಂಟಾಗುತ್ತಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ :**

ಬೆಂಗಳೂರು ನಗರಕ್ಕೆ ವಿಶ್ವ ಸಿನಿಮಾವನ್ನು ಪರಿಚಯಿಸುವ ಉದ್ದೇಶದಿಂದ 2011 ರಿಂದ ಕರ್ನಾಟಕ ಸರ್ಕಾರವು ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವವನ್ನು ಏರ್ಪಡಿಸುತ್ತಾ ಬಂದಿದೆ. 2011 ರಿಂದ ಇಲ್ಲಿಯವರೆಗೆ ಉತ್ತಮವಾಗಿ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವವನ್ನು ಸರ್ಕಾರವು ಆಯೋಜಿಸುತ್ತಾ ಬಂದಿದ್ದು, ಈಗಾಗಲೇ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ ಭಾರತದ ಪ್ರತಿಷ್ಠಿತ ಚಿತ್ರೋತ್ಸವವಾಗಿ ದೇಶ-ವಿದೇಶಗಳಲ್ಲಿ ಪ್ರಸಿದ್ಧಿ ಪಡೆದಿದೆ.

ಸದ್ಯದಲ್ಲಿಯೇ ನಮ್ಮ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವಕ್ಕೆ FIAPF (INTERNATIONAL FEDERATION OF FILM PRODUCERS ASSOCIATIONS) ದಿಂದ ಅಂತಾರಾಷ್ಟ್ರೀಯ ಮಾನ್ಯತೆ ದೊರೆಯುವ ಎಲ್ಲಾ ಲಕ್ಷಣಗಳು ಗೋಚರಿಸುತ್ತಿದೆ. ಇದರಿಂದ ಇಡೀ ಕರ್ನಾಟಕಕ್ಕೆ ವಿಶೇಷವಾಗಿ ಬೆಂಗಳೂರಿಗೆ ಜಾಗತಿಕ ಮಟ್ಟದಲ್ಲಿ ಮನ್ನಣೆ ಸಿಗುತ್ತದೆ. ಇದು ಕನ್ನಡ ಚಿತ್ರೋದ್ಯಮದ ಕೀರ್ತಿಯ ಶಿಖರಕ್ಕೆ ಮತ್ತೊಂದು ಗರಿ. ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವಕ್ಕೆ FIAPF ಅಂತಾರಾಷ್ಟ್ರೀಯ ಮಾನ್ಯತೆ ಪಡೆಯಬೇಕಾದಲ್ಲಿ ಚಿತ್ರೋತ್ಸವವನ್ನು ನಿರಂತರವಾಗಿ ಹಾಗೂ ನಿರ್ದಿಷ್ಟ ಮಾಹೆಯಲ್ಲಿಯೇ ನಡೆಸುವುದು ಅವಶ್ಯಕವಾಗಿದೆ.

ವಿಶ್ವದೆಲ್ಲೆಡೆ ಪ್ರತಿ ವರ್ಷ ಐದು ಸಾವಿರ ಚಿತ್ರೋತ್ಸವಗಳನ್ನು ಅಯೋಜಿಸಲಾಗುತ್ತಿದ್ದರೂ ಅದರಲ್ಲಿ ಕೇವಲ 45 ಚಿತ್ರೋತ್ಸವಗಳು ಮಾತ್ರ ಅಂತಾರಾಷ್ಟ್ರೀಯ ಮಾನ್ಯತೆ ಪಡೆದಿವೆ. ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವವನ್ನು ಪ್ರತಿ ವರ್ಷ ಆಯೋಜಿಸಿದಲ್ಲಿ ವಿಶ್ವದಲ್ಲಿ ಅಂತಾರಾಷ್ಟ್ರೀಯ ಚಿತ್ರೋತ್ಸವಕ್ಕೆ ಮಾನ್ಯತೆ ಪಡೆದಿರುವ ಆಯ್ದ 46 ಚಿತ್ರೋತ್ಸವಗಳಲ್ಲಿ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವವೂ ಒಂದಾಗುತ್ತದೆ. ಇದರಿಂದ ಅಂತಾರಾಷ್ಟ್ರೀಯ ಚಿತ್ರೋದ್ಯಮ ನಕ್ಷೆಯಲ್ಲಿ ಬೆಂಗಳೂರು ವಿಶ್ವ ಮಾನ್ಯತೆ ಪಡೆಯಲು ಅನುಕೂಲವಾಗಲಿದೆ.

...2

ಕೋವಿಡ್-19 ಸಾಂಕ್ರಮಿಕದಿಂದ ಚೇತರಿಸಿಕೊಳ್ಳುತ್ತಿರುವ ಈ ದಿನಗಳಲ್ಲಿ ಚಲನಚಿತ್ರ ಪ್ರದರ್ಶಗಳು ಪುನಾರಂಭವಾಗಿದ್ದು ಪ್ರೇಕ್ಷಕರ ಸಂಖ್ಯೆ ವಿರಳವಾಗಿದೆ. ಬೆಂಗಳೂರು ಅಂತಾರಾಷ್ಟ್ರೀಯ ಚಿತ್ರೋತ್ಸವ ಏರ್ಪಡಿಸುವುದರಿಂದ ಮತ್ತೆ ಪ್ರೇಕ್ಷಕರನ್ನು ಚಿತ್ರಮಂದಿರಗಳತ್ತ ಸೆಳೆಯಲು ಪ್ರೇರಕವಾಗಲಿದೆ ಎಂದು ಭಾವಿಸಲಾಗಿದ್ದು, ಇಡೀ ಚಿತ್ರರಂಗದ ಗಣ್ಯರು ಅಂತಾರಾಷ್ಟ್ರೀಯ ಮನ್ನಣೆ ಪಡೆದ ಖ್ಯಾತ ಚಿತ್ರ ನಿರ್ಮಾಪಕರು, ನಿರ್ದೇಶಕರು, ಕಲಾವಿದರು ಹಾಗೂ ತಂತ್ರಜ್ಞರು ಒಗ್ಗೂಡಿ ಈ ಚಿತ್ರೋತ್ಸವದಲ್ಲಿ ಪಾಲ್ಗೊಳ್ಳಲಿದ್ದಾರೆ. ಉದ್ಘಾಟನಾ ಸಮಾರಂಭದಲ್ಲಿ ಕರ್ನಾಟಕದ ನಾಡು-ನುಡಿ ಪರಂಪರೆಯನ್ನು ಬಿಂಬಿಸುವ ಕಾರ್ಯಕ್ರಮಗಳು, ಜಾನಪದ ಸೇರಿದಂತೆ ನಾಡಿನ ಹೆಸರಾಂತ ಪ್ರದರ್ಶಕ ಕಲಾ ಪ್ರಾಕಾರಗಳನ್ನು ಜಾಗತಿಕ ಮಟ್ಟಕ್ಕೆ ಪರಿಚಯಿಸುವ ಜೊತೆಗೆ ಚಿತ್ರರಂಗದ ಸ್ಥಳೀಯ ಕಲಾವಿದರನ್ನು ಬಳಸಿಕೊಳ್ಳುವುದರ ಮೂಲಕ ಅವರಿಗೂ ಕಲೆಯನ್ನು ಪ್ರದರ್ಶಿಸಲು ಇಲ್ಲಿ ಸುವರ್ಣಾವಕಾಶ ದೊರಕಲಿದೆ.

ಈ ಎಲ್ಲಾ ಕಾರಣಗಳಿಂದ ಮಾನ್ಯ ಮುಖ್ಯಮಂತ್ರಿ ಅವರ ಅಧ್ಯಕ್ಷತೆಯಲ್ಲಿ ದಿನಾಂಕ:01.12.2020 ಹಾಗೂ ದಿನಾಂಕ: 19.02.2021 ರಂದು ನಡೆದ ಸಭೆಯಲ್ಲಿ ಕೋವಿಡ್-19 ತಡೆಗಟ್ಟುವಿಕೆಯ ಕುರಿತು ಕೇಂದ್ರ ಹಾಗೂ ರಾಜ್ಯ ಸರ್ಕಾರ ಹೊರಡಿಸಿರುವ ಮಾರ್ಗ ಸೂಚಿಗಳಡಿಯಲ್ಲಿ 13ನೇ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವವನ್ನು 2021ರ ಮಾರ್ಚ್ 24 ರಿಂದ 31ರ ವರೆಗೆ ಬೆಂಗಳೂರಿನಲ್ಲಿ ಆಯೋಜಿಸಲು ತೀರ್ಮಾನಿಸಲಾಗಿದೆ. ಅಲ್ಲದೆ, ಇದು ಅಂತಾರಾಷ್ಟ್ರೀಯ ಮಟ್ಟದ ಚಿತ್ರೋತ್ಸವವಾಗಿರುವುದರಿಂದ ಹಾಗೂ ನಾಡಿನ ಕಲೆ, ಪರಂಪರೆ, ಕಂಪನ್ನು ಹೊರ ಜಗತ್ತಿಗೆ ಪರಿಚಯಿಸುವ ಅಗತ್ಯವಿರುವುದರಿಂದ ಸಹಜವಾಗಿಯೇ ಉದ್ಘಾಟನಾ ಸಮಾರಂಭ ಹಾಗೂ ಸಮಾರೋಪ ಸಮಾರಂಭವನ್ನು ವಾಡಿಕೆಯಂತೆ ಹಾಗೂ ಶಿಷ್ಟಾಚಾರದಂತೆ ಆಯೋಜಿಸಲು ಯೋಜಿಸಲಾಗಿದೆ.

ಸಂಖ್ಯೆ : KCI-PIP/64/2021.

(ಸಿ.ಸಿ.ಪಾಟೀಲ)
ಮಾನ್ಯ ಸಣ್ಣ ಕೈಗಾರಿಕೆ ಹಾಗೂ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಚಿವರು.